**ಓ.ಎಸ್. ನಂ. 97/2022** **ಪಿ.ಡಬ್ಲ್ಯೂ- 3**

**<u>ಸಾಕ್ಷಿಯನ್ನು ದಿನಾಂಕ 24.8.2023 ರಂದು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.</u>**

<u>ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಿಪಿ2 ಕ್ರಯದ ಕರಾರು ಪತ್ರಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುತ್ತೇನೆ. ಸದರಿ ದಾಖಲೆಯನ್ನು ಪ್ರತಿವಾದಿಗಳು ವಾದಿಗೆ ಬರೆದುಕೊಟ್ಟಿರುತ್ತಾರೆ. ಸದರಿ ದಾಖಲೆಗೆ 2, 6 ರಿಂದ 8 ನೇ ಪ್ರತಿವಾದಿಯರು ಹೆಬ್ಬೆಟ್ಟು ಗುರುತು ಹಾಕಿರುತ್ತಾರೆ, 1, 3 ರಿಂದ 6 ನೇ ಪ್ರತಿವಾದಿಯರು ಸದರಿ ದಾಖಲೆಗೆ ಸಹಿಯನ್ನು ಮಾಡಿರುತ್ತಾರೆ. ಸಾಕ್ಷಿದಾರರು ಅವರ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ2 ಎ ರಿಂದ 2 ಡಿ ಎಂದು ಗುರುತಿಸಲಾಗಿರುತ್ತದೆ. ವಾದಿಯು ಸದರಿ ದಾಖಲೆಗೆ ಹೆಬ್ಬೆಟ್ಟು ಗುರುತು ಹಾಕಿರುತ್ತಾರೆ. ಸಾಕ್ಷಿದಾರರು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ2 ಎಫ್ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಸಮಯ ಕೋರಿದ್ದು, ಮುಂದೂಡಲಾಯಿತು

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಓ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.